**ಓಎಸ್ ನಂಃ 8/2023**
**ಪಿಡಬ್ಲೂಃ 1**

**<u>ಸಾಕ್ಷಿಗೆ ದಿನಾಂಕ 04-12-2025ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ.ಜಿ.ಎಸ್. ವಕೀಲರಿಂದ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ಸರ್ವೆ ನಂಬರ್ 86/2ರ ಖಾಸ್ರಾ ಪಹಣಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದು ಮರಾಠಿ ಭಾಷೆಯಲ್ಲಿದ್ದ ಕಾರಣ ಅದರ ತರ್ಜುಮೆ ಪ್ರತಿಯನ್ನು ಹಾಜರುಪಡಿಸುವ ಷರತ್ತಿಗೊಳಪಟ್ಟು ನಿಪಿ-1 ಎಂದು, ಸರ್ವೆ ನಂಬರ್ 86/2ಅ ನೇದರ ಕೈಬರಹದ 6 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ 7 ಎಂದು ಗುರುತಿಸಲಾಯಿತು. ಸರ್ವೆ ನಂಬರ್ 86/2 ರ ಮ್ಯುಟೇಷನ್ ರಿಜಿಸ್ಟರ್ ನ ದೃಢೀಕೃತ ನಕಲನ್ನಉ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು. ಸರ್ವೆ ನಂಬರ್ 86/2 ರ 3 ಕಂಪ್ಯೂಟರ್ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-9 ರಿಂದ 11 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರಿದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,
ಚಿತ್ತಾಪೂರ.